ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

**PAPER CLIPPINGS**

ಶಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE 31/3/21

# ಸಚಿವರಿಲ್ಲದ ನೀರಾವರಿ ಖಾತೆ ಮುಖ್ಯಮಂತ್ರಿ ಮಹತ್ವದ ಸಭೆ

ಬೆಂಗಳೂರು: ಸಿಡಿ ಹಗರಣದ ಕಾರಣಕ್ಕೆ ರಮೇಶ್ ಜಾರಕಿಹೊಳಿ ಅವರು ಜಲಸಂಪನ್ಮೂಲ ಖಾತೆ ಕಳೆದುಕೊಂಡ ಬಳಿಕ ಇದೇ ಮೊದಲ ಬಾರಿಗೆ ಇಲಾಖೆಯ ಮಹತ್ವದ ಸಭೆಯನ್ನು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಬುಧವಾರ ಗೃಹಕಚೇರಿ ಕೃಷ್ಣಾದಲ್ಲಿ ನಡೆಸಲಿದ್ದಾರೆ.

ಮೊದಲಿಗೆ ಸಂಜೆ 4 ಗಂಟೆಗೆ ವಿಶ್ವೇಶ್ವರಯ್ಯ ನೀರಾವರಿ ನಿಗಮ, ಬಳಿಕ ಕರ್ನಾಟಕ ನೀರಾವರಿ ನಿಗಮ ಆದಾದ ನಂತರ ಕಾವೇರಿ ನೀರಾವರಿ ನಿಗಮ ಹಾಗೂ ಕೃಷ್ಣ ಭಾಗ್ಯ ಜಲನಿಗಮಗಳ ವಾರ್ಷಿಕ ಸಾಮಾನ್ಯ ಸಭೆ ನಡೆಸಲಿದ್ದಾರೆ. ಇದೇ ಸಂದರ್ಭದಲ್ಲಿ ಇಲಾಖೆಯ ಪ್ರಮುಖ ಯೋಜನೆಗಳ ಪ್ರಗತಿ ಪರಿಶೀಲನೆಯೂ ನಡೆಯಲಿದೆ. ರಮೇಶ್ ಜಾರಕಿಹೊಳಿ ಜಲಸಂಪನ್ಮೂಲ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ ಬಳಿಕ ಸಿಎಂ ತಮ್ಮ ಬಳಿಯೇ ಇರಿಸಿಕೊಂಡಿರುವ ಇಲಾಖೆಯ ಮಹತ್ವದ ಸಭೆ ಇದಾಗಿದೆ.